# ಕರ್ನಾಟಕ ಸರ್ಕಾರ

ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ
ತಿಪಟೂರು ತಾಲ್ಲೂಕು,
ತುಮಕೂರು.
ದಿ : 26-4-2002

## ನೋಂದಣಿ ಪ್ರಮಾಣ ಪತ್ರ

ನಮೂನೆ - 2 (ನಿಯಮ 3 ರ ಉಪ ನಿಯಮ 5 (ಬಿ) )

ಪ್ರಮಾಣ ಪತ್ರ ಸಂಖ್ಯೆ : 02:2002-03

ಕಲ್ಪತರು ವಿದ್ಯಾ ಸಂಸ್ಥೆ (ರಿ) ತಿಪಟೂರು.

ಇದರ ಗೌರ್ನಿನಿಂಗ್ ಕೌನ್ಸಿಲ್‌ಗೆ ಕರ್ನಾಟಕ ಶಿಕ್ಷಣ ಕಾಯ್ದೆ 1983 ( ಕರ್ನಾಟಕ ಆ್ಯಕ್ಟ್ 1 ಆಫ್ 1995 ) ಸೆಕ್ಷನ್ 31 ರಂತೆ 26ನೇ ಏಪ್ರಿಲ್ 2002ರಂದು
ಈ ಕೆಳಗೆ ನಮೂದಿಸಿರುವ ಶಿಕ್ಷಣ ಸಂಸ್ಥೆಯನ್ನು ನಡೆಸಲು ನೊಂದಾಯಿಸಲಾಗಿದೆಯೆಂದು ಪ್ರಮಾಣೀಕರಿಸಲಾಗಿದೆ.

| | | |
|---|---|---|
| 1. ಕ್ರಮ ಸಂಖ್ಯೆ | : | 02:2002-03 |
| 2. ಶಾಲೆಯ ಹೆಸರು ಮತ್ತು ಪೂರ್ಣ ವಿಳಾಸ | : | ಕಲ್ಪತರು ಕಿರಿಯ ಪ್ರಾಥಮಿಕ ಶಾಲೆ, ಬಿ.ಹೆಚ್.ರಸ್ತೆ, ತಿಪಟೂರು, ತುಮಕೂರು ಜಿಲ್ಲೆ. |
| 3. ಅನುಮತಿ ನೀಡಿದ ತರಗತಿಗಳು | : | 1 ರಿಂದ 4ನೇ ತರಗತಿ |
| 4. ಪ್ರಾರಂಭಿಸಬೇಕಾದ ಶೈಕ್ಷಣಿಕ ವರ್ಷ | : | 2002-03 |
| 5. ಅನುಮತಿ ನೀಡಿದ ಮಾಧ್ಯಮ | : | ಕನ್ನಡ ಮಾಧ್ಯಮ |
| 6. ಶುಲ್ಕ ಪಾವತಿ ಮಾಡಿರುವುದು | : | 5000-00 (ಐದು ಸಾವಿರ ರೂಗಳು ಮಾತ್ರ) |

ಸದರಿ ಶಿಕ್ಷಣ ಸಂಸ್ಥೆಯನ್ನು ಕ್ರಮಸಂಖ್ಯೆ 02 ಪುಟ ಸಂಖ್ಯೆ 14 ವಾಲ್ಯೂಂ ಸಂಖ್ಯೆ 02 ರಲ್ಲಿ ಈ ಕಛೇರಿಯಲ್ಲಿನ ಶೈಕ್ಷಣಿಕ ಸಂಸ್ಥೆಗಳ ನೋಂದಣಿ ವಹಿಯಲ್ಲಿ ನೊಂದಾಯಿಸಲಾಗಿದೆ.

### ಈ ಪ್ರಮಾಣ ಪತ್ರವನ್ನು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ನೀಡಲಾಗಿದೆ

1. ಈ ನೊಂದಾವಣೆಯು ನಿಯಮ 3ರ (4) ಮತ್ತು (5) ಕ್ಕೆ ಒಳಪಟ್ಟಿರುತ್ತದೆ.
2. ಗೌರ್ನಿನಿಂಗ್ ಕೌನ್ಸಿಲ್‌ರವರು ನಿಯಮ 4 (4) ರಲ್ಲಿ ತಿಳಿಸಿರುವ ಎಲ್ಲಾ ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸಬೇಕು.

Devika B. Swamy
PRINCIPAL
KALPATARU CENTRAL SCHOOL
TIPTUR - 572201, KARNATAKA

Secretary
Kalpataru Vidya Samsthe
TIPTUR

3. ಶಾಲಾ ನಿವೇಶನ, ವಿಸ್ತೀರ್ಣ, ಕಟ್ಟಡ, ಪಾಠೋಪಕರಣಗಳು, ಪೀಠೋಪಕರಣಗಳು, ಸಿಬ್ಬಂದಿ ವರ್ಗ ಆರ್ಥಿಕ ಅನುಕೂಲತೆಗಳು ಮುಂತಾದವುಗಳನ್ನು ಒದಗಿಸುವ ಷರತ್ತಿಗೆ ಒಳಪಟ್ಟಿರುತ್ತದೆ.

4. ಸದರಿ ಶಿಕ್ಷಣ ಸಂಸ್ಥೆಯು ಯಾವುದೇ ಸಂದರ್ಭದಲ್ಲಿಯೂ ಸರ್ಕಾರದ ಪೂರ್ವಾನುಮತಿ ಇಲ್ಲದೆ ಹೆಚ್ಚಿನ ವಿಭಾಗಗಳನ್ನು ತೆರೆಯುವಂತಿಲ್ಲ.

5. ಶಾಲೆಯನ್ನು ಮಂಜೂರು ಮಾಡಿರುವ ಮಾಧ್ಯಮದಲ್ಲಿ ಮತ್ತು ಅದೇ ಸ್ಥಳದಲ್ಲಿ ಮಾತ್ರ ತೆರೆಯತಕ್ಕದ್ದು ಹಾಗು ಯಾವುದೇ ಕಾರಣಕ್ಕೂ ಸ್ಥಳ ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ.

6. ಯಾವ ಆಡಳಿತ ಮಂಡಳಿಗೆ ಶಾಲೆಯನ್ನು ನಡೆಸಲು ಅನುಮತಿ ನೀಡಲಾಗಿದೆಯೋ ಅದೇ ಮಂಡಳಿಯು ಅದೇ ಸ್ಥಳದಲ್ಲಿಯೇ ಮತ್ತು ಅದೇ ಹೆಸರಿನಲ್ಲಿ ಶಾಲೆಯನ್ನು ನಡೆಸತಕ್ಕದ್ದು ಮತ್ತು ಯಾವುದೇ ಕಾರಣಕ್ಕೂ ಸರ್ಕಾರದ ಪೂರ್ವಾನುಮತಿ ಇಲ್ಲದೆ ಹಸ್ತಾಂತರಕ್ಕೆ ಅವಕಾಶವಿರುವುದಿಲ್ಲ.

7. ಸರ್ಕಾರಿ ಆದೇಶ ಸಂಖ್ಯೆ ಇಡಿ 28 ಪಿಜಿಸಿ 94 ದಿನಾಂಕ 29-4-94 ರಂತೆ 1 ರಿಂದ 4ನೇ ತರಗತಿಯವರೆಗೆ ಕನ್ನಡ ಅಥವಾ ಮಕ್ಕಳ ಮಾತೃಭಾಷಾ ಮಾಧ್ಯಮದಲ್ಲಿ ನಡೆಸಿ ಭಾಷಾ ನೀತಿಯನ್ನು ಪಾಲಿಸತಕ್ಕದ್ದು.

8. ಪ್ರತಿ ವರ್ಷವೂ ವಿದ್ಯಾರ್ಥಿಗಳ ವೈದ್ಯಕೀಯ ಪರೀಕ್ಷೆಯನ್ನು ನಿಯಮಾನುಸಾರ ಮಾಡಿಸತಕ್ಕದ್ದು.

9. ಕರ್ನಾಟಕ ಸಮಗ್ರ ಶಿಕ್ಷಣ ಮಸೂದೆ, 1983 (ಕರ್ನಾಟಕ ಆಕ್ಟ್ 1 ಆಫ್ 1995) ಇದರಡಿಯಲ್ಲಿ ಬರುವ ಕಾಯ್ದೆಗಳನ್ನು ಹಾಗೂ ರಚಿಸಲಾದ ಮತ್ತು ಆಗಿಂದಾಗ್ಗೆ ರಚಿಸಲಾಗುವ ನಿಯಮಗಳ ಸಂಬಂಧದಡಿಯಲ್ಲಿ ಮತ್ತು ಪ್ರಾಧಿಕಾರ ನೀಡುವ ಎಲ್ಲಾ ಷರತ್ತುಗಳನ್ನು ಹಾಗೂ ಆದೇಶಗಳನ್ನು ಕಟ್ಟುನಿಟ್ಟಾಗಿ ಪಾಲಿಸುವುದು.

10. ಶಿಕ್ಷಣ ಸಂಸ್ಥೆಯವರು ನಡೆಸುತ್ತಿರುವ ಶಾಲೆಗಳಿಗೆ ಸಂಬಂಧಿಸಿದಂತೆ ನೊಂದಣಿಯಾಗಿರುವ ಶಾಲೆಗಳೆಲ್ಲವೂ ಸರ್ಕಾರಿ ಅಧಿಸೂಚನೆ ಸಂಖ್ಯೆ ; ಇಡಿ 175 ಪಿಎಂ.ಸಿ. 95, ದಿನಾಂಕ 7-9-98 ಮತ್ತು ಇಡಿ 175 ಪಿಎಂಸಿ 97, ದಿನಾಂಕ 29-12-1998 ರಂತೆ ಶಾಶ್ವತ ಅನುದಾನ ರಹಿತ ಶಾಲೆಗಳೆಂಬುದಾಗಿ ಪರಿಗಣಿಸಿದೆ.

11. ಕರ್ನಾಟಕ ಖಾಸಗಿ ಶಿಕ್ಷಣ ಸಂಸ್ಥೆಗಳು (ಶಿಸ್ತು ಮತ್ತು ನಿಯಂತ್ರಣ) ನಿಯಮ 1978 ರ ನಿಯಮಗಳನ್ನು ತಪ್ಪದೇ ಪಾಲಿಸತಕ್ಕದ್ದು.

12. ಶಾಲೆಯು ಪ್ರಾರಂಭಿಸಿದ 2 ತಿಂಗಳ ಅವಧಿಯೊಳಗೆ ಪ್ರಥಮ ಮಾನ್ಯತೆಗೆ ಸಂಬಂಧಿಸಿದಂತೆ ಅರ್ಜಿಯನ್ನು ಸಲ್ಲಿಸತಕ್ಕದ್ದು.

13. ಅನುಮತಿ ನೀಡಿದ ಪ್ರತಿಯೊಂದು ತರಗತಿಯಲ್ಲಿ ಮಕ್ಕಳ ಹಾಗೂ ಶಿಕ್ಷಕರ ಅನುಪಾತವನ್ನು ನಿಯಮಾನುಸಾರ ಪಾಲಿಸತಕ್ಕದ್ದು.

14. ತರಬೇತಿ ಹೊಂದಿದ ಹಾಗೂ ಇಲಾಖಾ ನಿಯಮಗಳ ಪ್ರಕಾರ ವಿದ್ಯಾರ್ಹತೆ ಹೊಂದಿರುವ ಶಿಕ್ಷಕರನ್ನು ಮಾತ್ರ ನೇಮಕ ಮಾಡಿಕೊಳ್ಳತಕ್ಕದ್ದು.

15. ಕರ್ನಾಟಕ ಶಿಕ್ಷಣ ಮಸೂದೆಯ ಅನುಚ್ಛೇದ 6 ರ ಅಡಿಯಲ್ಲಿ ಉಪಬಂಧ 36 ರಿಂದ 39 ರಂತೆ ನೊಂದಣಿ ಮಾಡಿದ ಎಲ್ಲಾ ಶಾಲೆಗಳು 'ರೆಕಗ್ನಿಷನ್' ಹಾಗೂ 'ಪ್ರಾವಿಷನಲ್ ರೆಕಗ್ನಿಷನ್' ವ್ಯಾಪ್ತಿಗೆ ಬರುವುದು.

16. ಶಾಲೆಯನ್ನು ಪ್ರಾರಂಭಿಸಲು ಸಂಸ್ಥೆಯವರು ಭದ್ರತಾ ಠೇವಣಿಯನ್ನು ಜಿಲ್ಲಾ ಉಪ ನಿರ್ದೇಶಕ ಹಾಗೂ ಆಡಳಿತ ಮಂಡಳಿಯ ಕಾರ್ಯದರ್ಶಿಗಳ ಜಂಟಿ ಖಾತೆಯಲ್ಲಿ ಇಡತಕ್ಕದ್ದು.

17. ಕರ್ನಾಟಕ ಶಿಕ್ಷಣ ಮಸೂದೆ, 1983 ರ ನಿಯಮಗಳ ಪ್ರಕಾರ ಶಾಲೆಗೆ ಬೇಕಾದ ಪಾಠೋಪಕರಣ, ಪೀಠೋಪಕರಣ, ಗ್ರಂಥಾಲಯದ ಪುಸ್ತಕಗಳು, ಆಟದ ಮೈದಾನ, ಶಾಲಾ ಕಟ್ಟಡ ಮುಂತಾದ ಅಗತ್ಯ ಸೌಲಭ್ಯಗಳನ್ನು ಒಂದು ವರ್ಷದೊಳಗೆ ಒದಗಿಸತಕ್ಕದ್ದು. ಇಲ್ಲದಿದ್ದಲ್ಲಿ ನೊಂದಣಿಯನ್ನು ರದ್ದುಗೊಳಿಸಲಾಗುವುದು.

18. ಶಾಲೆ ತೆರೆದ ಬಗ್ಗೆ ಹಾಗೂ ವಿದ್ಯಾರ್ಥಿಗಳ ದಾಖಲಾತಿಯನ್ನು ಶಾಲೆ ನೊಂದಣಿಯಾದ ಅಥವಾ ಶೈಕ್ಷಣಿಕ ವರ್ಷ ಪ್ರಾರಂಭವಾದ 2 ತಿಂಗಳೊಳಗಾಗಿ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ತಪ್ಪದೇ ತಿಳಿಸತಕ್ಕದ್ದು, ಒಂದು ವೇಳೆ ಶಾಲೆ ತೆರೆಯದಿದ್ದಲ್ಲಿ ಹಾಗೂ ಯಾವುದೇ ಷರತ್ತುಗಳನ್ನು ಪಾಲಿಸದಿದ್ದಲ್ಲಿ ಈ ಆದೇಶ ರದ್ದಾಗುತ್ತದೆ.

ದಿನಾಂಕ : 26-04-2002
ಸ್ಥಳ : ತಿಪಟೂರು.

ಕ್ಷೇತ್ರ ಶಿಕ್ಷಣಾಧಿಕಾರಿಗಳು

Devika B. Swamy
PRINCIPAL
KALPATARU CENTRAL SCHOOL
TIPTUR - 572201, KARNATAKA

H. R. [signature]
Secretary
Kalpataru Vidya Samsthe
TIPTUR